ಅನುಬಂಧ–XII)

(ಗೊಂದಲ)

(iv) ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

(ಅ) ಕರ್ನಾಟಕ ಪಂಚಾಯತ್ ರಾಜ್ (ತಿದ್ದುಪಡಿ) ವಿಧೇಯಕ, 2010

ಪರ್ಯಾಲೋಚನಾ ಪ್ರಸ್ತಾಪ

ಶ್ರೀ ಜಗದೀಶ್ ಶೆಟ್ಟರ್(ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು): ಮಾನ್ಯ ಅಧ್ಯಕ್ಷರೆ, "ಕರ್ನಾಟಕ ವಿಧಾನ ಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 2010ರ ಕರ್ನಾಟಕ ಪಂಚಾಯತ್ ರಾಜ್ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ."

ಪ್ರಸ್ತಾವವನ್ನು ಮಂಡಿಸಲಾಯಿತು

ಅಧ್ಯಕ್ಷರು: ಪ್ರಸ್ತಾವ ಏನೆಂದರೆ;

"ಕರ್ನಾಟಕ ವಿಧಾನ ಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 2010ರ ಕರ್ನಾಟಕ ಪಂಚಾಯತ್ ರಾಜ್ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2ರಿಂದ 16ರವರೆಗೆ

ಅಧ್ಯಕ್ಷರು: "ಖಂಡ 2ರಿಂದ 16ರವರೆಗೆ ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತದೆ."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 2ರಿಂದ 16ರವರೆಗೆ ಎರಡೂ ಸೇರಿದಂತೆ ವಿಧೇಯಕಕ್ಕೆ ಸೇರಿಸಿಲಾಯಿತು)

ಖಂಡ 1 ಇತ್ಯಾದಿ

ಅಧ್ಯಕ್ಷರು: ಪ್ರಸ್ತಾವ ಏನೆಂದರೆ;

"ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲಾಯಿತು)

ಪ್ರಸ್ತಾವದ ಅಂಗೀಕಾರ

ಶ್ರೀ ಜಗದೀಶ್ ಶೆಟ್ಟರ್(ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು): ಮಾನ್ಯ ಅಧ್ಯಕ್ಷರೆ, ಕರ್ನಾಟಕ ವಿಧಾನ ಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 2010ರ ಕರ್ನಾಟಕ ಪಂಚಾಯತ್ ರಾಜ್ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು: ಪ್ರಸ್ತಾವ ಏನೆಂದರೆ;

"ಕರ್ನಾಟಕ ವಿಧಾನ ಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 2010ರ ಕರ್ನಾಟಕ ಪಂಚಾಯತ್ ರಾಜ್ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು

(ಗೊಂದಲ)

(ಆ) ಕರ್ನಾಟಕ ನ್ಯಾಯವಾದಿಗಳ ಕಲ್ಯಾಣ ನಿಧಿ (ತಿದ್ದುಪಡಿ) ವಿಧೇಯಕ, 2010

ಪರ್ಯಾಲೋಚನಾ ಪ್ರಸ್ತಾವ

ಅಧ್ಯಕ್ಷರು: ಪ್ರಸ್ತಾವ ಏನೆಂದರೆ "2010ರ ಕರ್ನಾಟಕ ನ್ಯಾಯವಾದಿಗಳ ಕಲ್ಯಾಣ ನಿಧಿ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು.'

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2 ರಿಂದ 11 ರವರೆಗೆ

ಅಧ್ಯಕ್ಷರು: "ಖಂಡ 2 ರಿಂದ 11 ರವರೆಗೆ ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತದೆ"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 2 ರಿಂದ 11ರವರೆಗೆ ಎರಡೂ ಸೇರಿದಂತೆ ವಿಧೇಯಕಕ್ಕೆ ಸೇರಿಸಲಾಯಿತು)

ಖಂಡ 1 ಇತ್ಯಾದಿ

ಅಧ್ಯಕ್ಷರು: ಪ್ರಸ್ತಾವ ಏನೆಂದರೆ "ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ದೀರ್ಘ ಶಿರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲಾಯಿತು)

(ಗೊಂದಲ)

ಪ್ರಸ್ತಾವದ ಅಂಗೀಕಾರ